ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 61 ಡಿಇವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ:29.06.2019

**ಸುತ್ತೋಲೆ**

ವಿಧಾನಸೌಧ ಮತ್ತು ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳ ಸುರಕ್ಷತೆ ಹಾಗೂ ಭದ್ರತೆಯ ಹಿತದೃಷ್ಟಿಯಿಂದ ಈ ಹಿಂದೆ ನೀಡಲಾದಂತಹ ಗುರುತಿನ ಚೀಟಿಗಳನ್ನು ಹಿಂಪಡೆದು ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಕ್ಕೆ ಒಳಪ್ರವೇಶಿಸುವ ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿ/ಸಿಬ್ಬಂದಿಗಳಿಗೆ ಹೊಸ ಸ್ಮಾರ್ಟ್ ಕಾರ್ಡ್‌ಗಳನ್ನು ಫೆಬ್ರವರಿ 2019ರಿಂದ ವಿತರಿಸಲಾಗುತ್ತಿದ್ದು ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಚಿವಾಲಯದ ಅಧಿಕಾರಿ/ನೌಕರರುಗಳು ಸಿಆಸುಇ (ಕಾರ್ಯಕಾರಿ) ವತಿಯಿಂದ ವಿತರಿಸಲಾಗಿರುವ ಗುರುತಿನ ಚೀಟಿಯನ್ನು ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳನ್ನು ಪ್ರವೇಶಿಸುವಾಗ ಹಾಗೂ ಕಛೇರಿಯಲ್ಲಿ ಕೆಲಸ ನಿರ್ವಹಿಸುವ ಸಂದರ್ಭದಲ್ಲಿಯೂ ಸಹ 01/07/2019 ರಿಂದ ಟ್ಯಾಗ್ ಹೊಂದಿರುವ ಸ್ಮಾರ್ಟ್ ಕಾರ್ಡ್‌ಗಳನ್ನು ಧರಿಸುವುದು ಕಡ್ಡಾಯಗೊಳಿಸಿದೆ.

ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳಲ್ಲಿ ಹೊರಗುತ್ತಿಗೆ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನೀಡಿರುವ ಗುರುತಿನ ಚೀಟಿಯನ್ನು ಕಛೇರಿಯನ್ನು ಪ್ರವೇಶಿಸುವಾಗ ಮತ್ತು ಕಾರ್ಯ ನಿರ್ವಹಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ತಮ್ಮೊಂದಿಗೆ ಇರಿಸಿಕೊಳ್ಳುವಂತೆ ಮತ್ತು ಕೋರಿದಾಗ ಪ್ರದರ್ಶಿಸುವಂತೆ ಸೂಚಿಸಿದೆ.

(ಕೇಶವಪ್ರಸಾದ್.ಕೆ.ಹೆಚ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಆಸುಇ (ಕಾರ್ಯಕಾರಿ)

**ಇವರಿಗೆ;**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ/ವಿಶೇಷ/ಕಾರ್ಯದರ್ಶಿ/ ಮುಖ್ಯ ಮಂತ್ರಿಯವರ ಸಚಿವಾಲಯ/ಮಾನ್ಯ ಸಚಿವರುಗಳು/ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
3. ಉಪ ಪೊಲೀಸ್ ಆಯುಕ್ತರು, ವಿಧಾನಸೌಧ ಭದ್ರತೆ, ವಿಧಾನಸೌಧ, ಬೆಂಗಳೂರು.
4. ಹಿರಿಯ ಮೇಲ್ವಿಚಾರಕರು, ಸಿಆಸುಇ (ಕಾರ್ಯಕಾರಿ) ವಿಧಾನಸೌಧ, ಇವರಿಗೆ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5. ಭದ್ರತಾಧಿಕಾರಿಗಳು/ಎಲ್ಲಾ ಸ್ವಾಗತಕಾರರು, ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.